**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ., ಹುಣಸೂರು.**

# ಸಿ.ಸಿ. ಸಂಖ್ಯೆಃ 3338/2022

**ಸಾಕ್ಷಿಯನ್ನು ದಿಃ 10.03.2026 ರಂದು ಕರೆಸಿ ಪ್ರಮಾಣವಚನ ಬೋದಿಸಲಾಯಿತು.**

| | | |
|---|---|---|
| ಹೆಸರು | ಷಣ್ಮುಗಂ | ಸಿ.ಡಬ್ಲ್ಯೂಃ **07** ಪಿ.ಡಬ್ಲ್ಯೂಃ **06** |
| ತಂದೆಯ ಹೆಸರು | ಮಣಿ | |
| ವಯಸ್ಸು | **41** ವರ್ಷ | |
| ಕೆಲಸ | ಪಿ.ಐ., ಸಿ.ಸಿ.ಬಿ ಬೆಂಗಳೂರು. | |
| ವಾಸಸ್ಥಳ | ಬೆಂಗಳೂರು. | |

ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ

ನಾನು ಡಿಸೆಂಬರ್ 2015 ರಿಂದ ಡಿಸೆಬಂರ್ 2017ರವರೆಗೆ ನಾನು ಹುಣಸೂರು ಪಟ್ಟಣ ಠಾಣೆಯಲ್ಲಿ ಪಿ.ಎಸ್.ಐಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 29.01.2017 ರಂದು ಈ ಪ್ರಕರಣದ ಕಡತವನ್ನು ಚಾಸಾ-6 ರವರಿಂದ ಸ್ವೀಕರಿಸಿ, ಕಡತವನ್ನು ಪರಿಶೀಲಿಸಿ ತನಿಖೆಯನ್ನು ಮುಂದುವರಿಸಿರುತ್ತೇನೆ. ಅದೇ ದಿನ ಚಾಸಾ-1 ರವರು ಕೃತ್ಯ ನಡೆದ ಸ್ಥಳವನ್ನು ತೋರಿಸಿದ ಮೇರೆಗೆ ಪಂಚರಾದ ಚಾಸಾ-4 ಮತ್ತು 5 ರ ಸಮಕ್ಷಮ ಬೆಳಿಗ್ಗೆ 11.30 ರಿಂದ 12.20 ರವರೆಗೆ ಮಹಜರು ಕ್ರಮವನ್ನು ಜರುಗಿಸಿರುತ್ತೇನೆ. ಸದರಿ ಮಹಜರನ್ನು ಈಗಾಗಲೇ ನಿಪಿ-1 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ-1 ಬಿ ಎಂದು ಗುರುತಿಸಲಾಯಿತು. ಅದೇ ದಿನ ಸಾಕ್ಷಿದಾರರಾದ ಚಾಸಾ-2 ಮತ್ತು 3 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಈ ಹಂತದಲ್ಲಿ ತನಿಖೆ ಪೂರ್ಣಗೊಳಿಸಿ ದಿನಾಂಕಃ 04.02.2017 ರಂದು ಆರೋಪಿತರ ವಿರುದ್ಧ ದೋಷಾರೋಪಣಾ ಪತ್ರವನ್ನು ಸಲ್ಲಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಸ್ ಎನ್ ಕೆ ಪರ ಕು. ಎ ಎಸ್ ಎಂ ವಕೀಲರಿಂದಃ**

ಕಾಲಾವಕಾಶ ಕೋರಿದ್ದು , ಸೂಕ್ತ ಕಾರಣಗಳನ್ನು ನೀಡದೇ ಇರುವ ಕಾರಣ ಕೋರಿಕೆಯನ್ನು ತಳ್ಳಿ ಹಾಕಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಇಲ್ಲ.
(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.

(ಅನಿತ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆ.ಎಂ.ಎಫ್.ಸಿ.ಹುಣಸೂರು.